ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**709(903)**
ಸದಸ್ಯರ ಹೆಸರು	:	**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)**
ಉತ್ತರಿಸುವ ದಿನಾಂಕ	:	**20.09.2021**
ಉತ್ತರಿಸುವ ಸಚಿವರು	:	**ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು**

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ಬೀದರ್ ಜಿಲ್ಲೆಯು ಹೈದರಾಬಾದ್-ಕರ್ನಾಟಕ ವಿಭಾಗದಲ್ಲಿ ಬರುತ್ತಿದ್ದು, ಇಲ್ಲಿ ಯುನಾನಿ ಚಿಕಿತ್ಸೆಗೆ ಹೆಚ್ಚಿನ ಒಲವು ಇರುವುದರಿಂದ, ಅದಕ್ಕೆ ಹೆಚ್ಚಿನ ಮಹತ್ವ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ)	ಹಾಗಿದ್ದಲ್ಲಿ, ಈ ಯುನಾನಿ ಚಿಕಿತ್ಸೆ ಬೆಳೆಸಿ, ರಾಜ್ಯದಲ್ಲಿ ಮುಂದುವರೆಸಲು ಜಿಲ್ಲೆಯಲ್ಲಿ ಒಂದು ಯುನಾನಿ ಮೆಡಿಕಲ್ ಕಾಲೇಜು ಪ್ರಾರಂಭಿಸುವ ಅವಶ್ಯಕತೆ ಇದೆಯೇ; ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು? (ಸೂಕ್ತವಾದ ಕಾರಣ ನೀಡುವುದು)	ಪ್ರಸ್ತುತ ರಾಜ್ಯದಲ್ಲಿ ಒಂದು ಸರ್ಕಾರಿ, ನಾಲ್ಕು ಖಾಸಗಿ ಯುನಾನಿ ವೈದ್ಯಕೀಯ ಮಹಾವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಬೇಡಿಕೆಗನುಸಾರ ಯುನಾನಿ ಪದ್ಧತಿಯಲ್ಲಿ ವೈದ್ಯಕೀಯ ಶಿಕ್ಷಣವನ್ನು ನೀಡಲಾಗುತ್ತಿದೆ. ಹೊಸದಾಗಿ ಸರ್ಕಾರಿ ಯುನಾನಿ ವೈದ್ಯಕೀಯ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ಸಿಸಿಐಎಂ, ನವದೆಹಲಿ ಇವರು ನಿರ್ಧಿಷ್ಟಪಡಿಸಿರುವ ಮಾನದಂಡಗಳನ್ವಯ ಮಹಾವಿದ್ಯಾಲಯ ಪ್ರಾರಂಭಿಸುವ ಮೊದಲು 60 ಹಾಸಿಗೆಗಳ ಆಸ್ಪತ್ರೆಯನ್ನು ಪ್ರಾರಂಭಿಸಿ, ಒಳ ಮತ್ತು ಹೊರರೋಗಿಗಳ ಚಿಕಿತ್ಸೆಯನ್ನು ನೀಡಬೇಕಾಗಿರುತ್ತದೆ. ಕನಿಷ್ಟ 3 ಎಕರೆ ವಿಸ್ತೀರ್ಣದ ನಿವೇಶನ ಅಗತ್ಯವಾಗಿರುತ್ತದೆ. ಪ್ರಸ್ತುತ ಬೀದರ್ ನಗರದಲ್ಲಿ ಯಾವುದೇ ಸರ್ಕಾರಿ ಯುನಾನಿ ಆಸ್ಪತ್ರೆ ಮತ್ತು ನಿವೇಶನ ಇಲ್ಲದಿರುವುದರಿಂದ, ಸಿಸಿಐಎಂ ನಿರ್ಧಿಷ್ಟ ಪಡಿಸಿದ ಮಾನದಂಡವನ್ನು ಪೂರೈಸದಿರುವ ಕಾರಣ, ಬೀದರ್ ಜಿಲ್ಲೆಯಲ್ಲಿ ಯುನಾನಿ ಮಹಾವಿದ್ಯಾಲಯವನ್ನು ಸ್ಥಾಪನೆ ಮಾಡಲು ಸಾಧ್ಯವಾಗುವುದಿಲ್ಲ.

ಸಂಖ್ಯೆ: ಆಕುಕ 74 ಫಿಟಿಡಿ 2021/ಇ.ಆ

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು